# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 1898(2293)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ವಿಷಯ : ಗ್ರಾಮಾಂತರ ಪ್ರದೇಶಗಳಿಗೆ ಸಾರಿಗೆ ಬಸ್ ಸಂಚಾರ ವ್ಯವಸ್ಥೆ ಕಲ್ಪಿಸುವ ಬಗ್ಗೆ

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ವ್ಯಾಪ್ತಿಯ ಗ್ರಾಮೀಣ ಭಾಗದಲ್ಲಿ ಸಮರ್ಪಕವಾಗಿ ಬಸ್ ಸಂಚಾರ ವ್ಯವಸ್ಥೆಯಿಲ್ಲದೆ ಸಾರ್ವಜನಿಕರು, ವಿದ್ಯಾರ್ಥಿಗಳು, ಕೂಲಿ-ಕಾರ್ಮಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವುದು ಯಾವಾಗ; (ವಿವರ ನೀಡುವುದು)

(ಇ) ನಾಗಮಂಗಲ ತಾಲ್ಲೂಕಿನ ಗ್ರಾಮೀಣ ಭಾಗಗಳಿಗೆ ಹೊಸದಾಗಿ ಬಸ್ ಸಂಚಾರ ವ್ಯವಸ್ಥೆಗೆ ಯಾವಾಗ ಕ್ರಮ ಕೈಗೊಳ್ಳಲಾಗುವುದು; (ಹೊಸದಾಗಿ ಬಸ್ ಸಂಚಾರ ಪ್ರಾರಂಭ ಮಾಡುವ ಸಮಯ ಹಾಗೂ ಮಾರ್ಗದ ವಿವರ ನೀಡುವುದು)

(ಈ) ನಾಗಮಂಗಲ-ಮೈಸೂರು ಮುಖ್ಯ ರಸ್ತೆಯಲ್ಲಿ ದಿನನಿತ್ಯ ಓಡಾಡುವ ಸಾರಿಗೆ ಬಸ್‌ಗಳನ್ನು ಹೊನ್ನಬೆಟ್ಟದ ಹೊಸೂರು, ಮಡಿಕೆ ಹೊಸೂರು-ಕಲ್ಲುದೇವನಹಳ್ಳಿ ಗೇಟ್ ಬಳಿ ನಿಲುಗಡೆ ನೀಡಲಾಗುತ್ತಿದೆಯೇ;

(ಉ) ಇಲ್ಲದಿದ್ದಲ್ಲಿ, ಈ ಪ್ರದೇಶದಲ್ಲಿ ನೂತನವಾಗಿ ಕೇಂದ್ರ ಸರ್ಕಾರದ ಆಯುಷ್ ಸಂಶೋಧನ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುವ ಮತ್ತು ಸುತ್ತಮುತ್ತಲ ಗ್ರಾಮಗಳ ಜನರಿಗೆ ದಿನನಿತ್ಯ ತಾಲ್ಲೂಕು ಕೇಂದ್ರ ಮತ್ತು ಮೈಸೂರಿಗೆ ಓಡಾಡಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಬಂದಿದ್ದಲ್ಲಿ, ಸದರಿ ಸ್ಥಳದಲ್ಲಿ ಬಸ್ ನಿಲುಗಡೆಯನ್ನು ಎಂದಿನಿಂದ ಪ್ರಾರಂಭ ಮಾಡಲಾಗುವುದು? (ವಿವರ ನೀಡುವುದು)